## ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಗೋವಿಂದರಾಜು, ಇವರು ಶೂನ್ಯ ವೇಳೆಯಲ್ಲಿ ಪ್ರಸ್ತಾಪಿಸಿರುವ ವಿಷಯಕ್ಕೆ ಸರ್ಕಾರದ ಉತ್ತರ.

**:ವಿಷಯ:**

ರಾಜ್ಯದಲ್ಲಿ ಉನ್ನತ ಶಿಕ್ಷಣ ಪಡೆಯುತ್ತಿರುವ ಪರಿಶಿಷ್ಟ, ಹಿಂದುಳಿದ ಮತ್ತು ಅಲ್ಪಸಂಖ್ಯಾತ ವರ್ಗಗಳಿಗೆ ಸೇರಿದ ಬಹುತೇಕ ವಿದ್ಯಾರ್ಥಿಗಳು ವಿದ್ಯಾರ್ಥಿ ವೇತನಕ್ಕಾಗಿ ಪರದಾಡುತ್ತಿದ್ದಾರೆ. ಮೂರು ವರ್ಷಗಳಿಂದ ರಾಜ್ಯ ಸರ್ಕಾರದಿಂದ ಬರೀ ಭರವಸೆ ಸಿಕ್ಕಿದೆಯೇ ಹೊರತು ವಿದ್ಯಾರ್ಥಿ ವೇತನ ಸಿಕ್ಕಿಲ್ಲ ಎಂದು ವಿದ್ಯಾರ್ಥಿಗಳು ಆರೋಪಿಸಿದ್ದಾರೆ. ಹಿಂದುಳಿದ ವರ್ಗಗಳ ಕಲ್ಯಾಣ ಇಲ್ಯಾಖೆ, ಪರಿಶಿಷ್ಟ ಮತ್ತು ಅಲ್ಪಸಂಖ್ಯಾತ ಕಲ್ಯಾಣ ಇಲಾಖೆಯಡಿ ಬರುವ ಇಂಜಿನಿಯರಿಂಗ್ ಮತ್ತು ವೈದ್ಯಕೀಯ ವಿದ್ಯಾರ್ಥಿಗಳಿಗೆ ವಿದ್ಯಾರ್ಥಿ ವೇತನ ಸರಿಯಾಗಿ ಲಭ್ಯವಾಗಿಲ್ಲ.

ಕೋವಿಡ್ ಸಮಸ್ಯೆಯಿಂದ ಎಂಜಿನಿಯರಿಂಗ್ ಮತ್ತಿತರ ಪದವಿಗಳ ಅವಧಿ ಕಡಿಮೆ ಮಾಡಲಾಯಿತು. ಆದರೆ, ವೈದ್ಯಕೀಯ ಶಿಕ್ಷಣದಲ್ಲಿ ಇದು ಸಾಧ್ಯವಾಗಲಿಲ್ಲ. ಪೂರ್ಣ ಅವಧಿ ಮುಗಿಸಲೇಬೇಕು ಎಂದು ಸರ್ಕಾರದ ಆದೇಶ ಹೊರಡಿಸಿತು. ಅವಧಿ ಕಡಿಮೆ ಮಾಡಿದ ಪದವಿಗಳ ವಿದ್ಯಾರ್ಥಿ ವೇತನ ನಿಲ್ಲಿಸಲಾಯಿತು. ಅದರೊಂದಿಗೆ ವೈದ್ಯಕೀಯ ವಿದ್ಯಾರ್ಥಿಗಳ ವೇತನವೂ ನಿಲ್ಲಿಸಲಾಗಿದೆ. 2024ನೇ ಸಾಲಿಗೆ ಬರಬೇಕಿದ್ದ ರೂ. 55,500/- ನಮ್ಮ ಕೈಸೇರಿಲ್ಲ ಎಂಬುದು ವಿದ್ಯಾರ್ಥಿಗಳ ಅಳಲು. ರಾಜ್ಯದ ಖಾಸಗಿ ಇಂಜಿನಿಯರಿಂಗ್ ಹಾಗೂ ವೈದ್ಯಕೀಯ ಕಾಲೇಜುಗಳಲ್ಲಿ ವ್ಯಾಸಂಗ ಮಾಡುತ್ತಿರುವ ಇಂಥ ವಿದ್ಯಾರ್ಥಿಗಳ ಸಂಖ್ಯೆ 80 ಸಾವಿರಕ್ಕೂ ಹೆಚ್ಚಿದೆ. 7000 ಕ್ಕೂ ಹೆಚ್ಚು ಎಂ.ಬಿ.ಎ, ಎಂ.ಸಿ.ಎ ಮತ್ತು ಎಂ.ಟೆಕ್ ವಿದ್ಯಾರ್ಥಿಗಳು ಇದ್ದಾರೆ. ಶಿಷ್ಯವೇತನ ನಂಬಿ ಪ್ರವೇಶ ಪಡೆದವರು ಸಾಕಷ್ಟಿದ್ದಾರೆ. ಸರ್ಕಾರದ ಧೋರಣೆಯ ಕಾರಣ ರೈತರು, ಕೂಲಿ ಕಾರ್ಮಿಕರು, ಬಡವರ ಮಕ್ಕಳ ಉನ್ನತ ಶಿಕ್ಷಣ ಅಡ್ಡಕತ್ತರಿಗೆ ಸಿಕ್ಕಿಕೊಂಡಿರುವುದರಿಂದ, ಈ ಕೂಡಲೇ ಸರಕಾರ ವಿದ್ಯಾರ್ಥಿಗಳ ಹಿತದೃಷ್ಟಿಯಿಂದ ವಿದ್ಯಾರ್ಥಿ ವೇತನವನ್ನು ವಿಳಂಬ ಮಾಡದೆ ಬಿಡುಗಡೆ ಮಾಡುವ ಕುರಿತು.

**:ಉತ್ತರ:**

**ತಾಂತ್ರಿಕ ಶಿಕ್ಷಣ ಇಲಾಖಾ** ವ್ಯಾಪ್ತಿಯಲ್ಲಿ ಬರುವ ರಾಜ್ಯದಲ್ಲಿ ವಿವಿಧ ವೃತ್ತಿಪರ ಕೋರ್ಸುಗಳಿಗೆ ಪ್ರವೇಶ ಪಡೆದು ಸರ್ಕಾರಿ ಇಂಜಿನಿಯರಿಂಗ್ ಮತ್ತು ಪಾಲಿಟೆಕ್ನಿಕ್ ಕಾಲೇಜುಗಳಲ್ಲಿ ವ್ಯಾಸಂಗ ಮಾಡುತ್ತಿರುವ ಕುಟುಂಬದ ವಾರ್ಷಿಕ ಆದಾಯ ರೂ.2.50 ಲಕ್ಷಗಳಿಂದ ರೂ. 10.00 ಲಕ್ಷಗಳ ಒಳಗಿರುವ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ವಿದ್ಯಾರ್ಥಿಗಳಿಗೆ ಈ ಕೆಳಕಂಡಂತೆ ಶುಲ್ಕ ಮರುಪಾವತಿ ಮಾಡಲಾಗುತ್ತಿದೆ. ಹಿಂದುಳಿದ ವರ್ಗಗಳ ಮತ್ತು ಅಲ್ಪಸಂಖ್ಯಾತ ವಿದ್ಯಾರ್ಥಿಗಳಿಗೆ ತಾಂತ್ರಿಕ ಶಿಕ್ಷಣ ಇಲಾಖಾ ವತಿಯಿಂದ ಯಾವುದೇ ಶುಲ್ಕ ಮರುಪಾವತಿ/ವಿದ್ಯಾರ್ಥಿವೇತನ ನೀಡುತ್ತಿಲ್ಲ.

1. ಕರ್ನಾಟಕ ಪರೀಕ್ಷಾ ಪ್ರಾಧಿಕಾರದಿಂದ ಬಿ.ಇ/ಬಿ.ಟೆಕ್/ಬಿ.ಆರ್ಕ್ ಗೆ ಪ್ರವೇಶ ಪಡೆಯುವ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ವಿದ್ಯಾರ್ಥಿಗಳಿಗೆ ಶೇ.100ರಷ್ಟು ಶುಲ್ಕ ಮರುಪಾವತಿ.
2. ಕಾಮೆಡ್-ಕೆ ಮೂಲಕ & ಡೀಮ್ಡ್ ಯೂನಿವರ್ಸಿಟಿ ಕಾಲೇಜುಗಳಲ್ಲಿ ಮೊದಲನೇ ವರ್ಷ ಬಿ.ಇ/ಬಿ.ಟೆಕ್/ಬಿ.ಆರ್ಕ್ ಗೆ ಪ್ರವೇಶ ಪಡೆಯುವ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ವಿದ್ಯಾರ್ಥಿಗಳಿಗೆ, ಸ್ನಾತಕೋತ್ತರ ಪದವಿ (ಪಿ.ಜಿ) ಗೆ ಕರ್ನಾಟಕ ಪರೀಕ್ಷಾ ಪ್ರಾಧಿಕಾರದಿಂದ ಆಯ್ಕೆಯಾಗುವ ಎಂ.ಇ/ಎಂ.ಟೆಕ್/ಎಂ.ಆರ್ಕ್ ಕೋರ್ಸುಗಳಿಗೆ ಪ್ರವೇಶ ಪಡೆಯುವ ವಿದ್ಯಾರ್ಥಿಗಳಿಗೆ ಶೇ.50ರಷ್ಟು ಶುಲ್ಕವನ್ನು ಮರುಪಾವತಿ ಮಾಡಲಾಗುತ್ತಿದೆ.

ಪ್ರಸಕ್ತ ಆರ್ಥಿಕ ಸಾಲಿನಲ್ಲಿ ಸದರಿ ಉದ್ದೇಶಕ್ಕೆ ಲೆಕ್ಕಶೀರ್ಷಿಕೆ : 2203-00-107-1-01-422ರಡಿ ರೂ.12.00 ಕೋಟಿ ಹಾಗೂ 2203-00-107-1-01-423ರಡಿ ರೂ.5.00 ಕೋಟಿ ಅನುದಾನ ಬಿಡುಗಡೆಗೊಳಿಸಲಾಗಿದೆ. ಲೆಕ್ಕಶೀರ್ಷಿಕೆ 2203-00-107-1-01-423ರಡಿ ಮಂಜೂರಾಗಿದ್ದ ರೂ.5.00

ಕೋಟಿ ಅನುದಾನದಲ್ಲಿ 2023-24ನೇ ಸಾಲಿನವರೆಗೆ ಶುಲ್ಕ ಮರುಪಾವತಿಗಾಗಿ ಅರ್ಜಿ ಸಲ್ಲಿಸಿ ಅರ್ಹರಿದ್ದ ಎಲ್ಲಾ ಪರಿಶಿಷ್ಟ ಪಂಗಡದ ವಿದ್ಯಾರ್ಥಿಗಳಿಗೆ ಶುಲ್ಕ ಮರುಪಾವತಿ ಮಾಡಲಾಗಿರುತ್ತದೆ. ಆದರೆ, ಪ್ರಸಕ್ತ ಸಾಲಿನಲ್ಲಿ ಒಟ್ಟಾರೆ 2829 ಪರಿಶಿಷ್ಟ ಜಾತಿ ವಿದ್ಯಾರ್ಥಿಗಳು ಅರ್ಜಿ ಸಲ್ಲಿಸಿದ್ದು, ಅವರಲ್ಲಿ 1956 ವಿದ್ಯಾರ್ಥಿಗಳಿಗೆ ಶುಲ್ಕ ಮರುಪಾವತಿ ಮಾಡಲಾಗಿರುತ್ತದೆ. ಇನ್ನುಳಿದ 873 ಪರಿಶಿಷ್ಟ ಜಾತಿಯ ಇಂಜಿನಿಯರಿಂಗ್ ವಿದ್ಯಾರ್ಥಿಗಳಿಗೆ ಅನುದಾನದ ಕೊರತೆಯಿಂದ ಶುಲ್ಕ ಮರುಪಾವತಿ ಮಾಡಲಾಗಿರುವುದಿಲ್ಲ.ಸದರಿ ಉದ್ದೇಶಕ್ಕೆ ಲೆಕ್ಕಶೀರ್ಷಿಕೆ : 2203-00-107-1-01-422ರಡಿ ಹೆಚ್ಚುವರಿಯಾಗಿ ರೂ. 6.00 ಕೋಟಿ ಅನುದಾನದ ಕೊರತೆಯಿದ್ದು, ಸದರಿ ಹೆಚ್ಚುವರಿ ಅನುದಾನವನ್ನು ಬಿಡುಗಡೆಗೊಳಿಸಲು ಆರ್ಥಿಕ ಇಲಾಖೆಯನ್ನು ಕೋರಲಾಗಿದೆ.

ಕೋವಿಡ್ ಮತ್ತು ಕೋವಿಡ್ ನಂತರ ಅವಧಿಯಲ್ಲಿ ತಾಂತ್ರಿಕ ಶಿಕ್ಷಣ ಇಲಾಖೆಯಿಂದ ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡದ ವಿದ್ಯಾರ್ಥಿಗಳಿಗೆ ಶುಲ್ಕ ಮರುಪಾವತಿ ಮಾಡಿರುವ ವಿವರಗಳನ್ನು ಅನುಬಂಧ-1ರಲ್ಲಿ ಒದಗಿಸಿದೆ.

**ಕಾಲೇಜು ಶಿಕ್ಷಣ ಇಲಾಖೆಯಲ್ಲಿ** 2019-20ನೇ ಸಾಲಿನಿಂದ ಎಸ್.ಎಸ್.ಪಿ ಪೋರ್ಟಲ್ ಮೂಲಕ ಶುಲ್ಕ ಮರುಪಾವತಿಗೆ ಅರ್ಜಿ ಸಲ್ಲಿಸಿದ ಅರ್ಹ ವಿದ್ಯಾರ್ಥಿಗಳೆಲ್ಲರಿಗೂ ಇಲಾಖೆಯಿಂದ ಶುಲ್ಕ ಮರುಪಾವತಿ ಮಾಡಲಾಗಿದ್ದು, ವಿವರಗಳನ್ನು ಅನುಬಂಧ-2ರಲ್ಲಿ ಒದಗಿಸಿದೆ.

**ವೈದ್ಯಕೀಯ ಶಿಕ್ಷಣ ಇಲಾಖೆ**ಯಡಿಯಲ್ಲಿ ವಿದ್ಯಾರ್ಥಿಗಳ ಕುಟುಂಬದ ವಾರ್ಷಿಕ ವರಮಾನ ರೂ. 2.50 ಲಕ್ಷಕ್ಕಿಂತ ಅಧಿಕವಿದ್ದು ರೂ. 10.00 ಲಕ್ಷದ ಮಿತಿಯೊಳಗಿನ ರಾಜ್ಯದ ಸರ್ಕಾರಿ/ಖಾಸಗಿ ವೈದ್ಯಕೀಯ/ದಂತ ಕಾಲೇಜುಗಳಲ್ಲಿನ ಸರ್ಕಾರಿ ಕೋಟಾದ ಸೀಟುಗಳಿಗೆ ಆಯ್ಕೆಯಾಗಿ ಎಂಬಿಬಿಎಸ್/ಬಿಡಿಎಸ್/ಎಂಡಿ/ಎಂಡಿಎಸ್ ಹಾಗೂ ವೈದ್ಯಕೀಯ ಡಿಪ್ಲೋಮಾ ವ್ಯಾಸಂಗ ಮಾಡುತ್ತಿರುವ ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡ ವಿದ್ಯಾರ್ಥಿಗಳಿಗೆ SSP-DBT ಆನ್ ಲೈನ್ ಮುಖಾಂತರ ವಿದ್ಯಾರ್ಥಿ ವೇತನವನ್ನು ಪಾವತಿಸಲಾಗುತ್ತಿದೆ. ಪ್ರಸ್ತುತ ಆರ್ಥಿಕ ವರ್ಷದಲ್ಲಿ ರೂ. 650.00ಲಕ್ಷಗಳ ಅನುದಾನವನ್ನು ಬಿಡಗಡೆ ಮಾಡಲಾಗಿದ್ದು, ಸದರಿ ಅನುದಾನದಲ್ಲಿ ಈ ಹಿಂದೆ ಬಾಕಿ ಉಳಿದ ಅರ್ಜಿಗಳಿಗೆ ಮತ್ತು 2023-24ನೇ ಸಾಲಿನಲ್ಲಿ ಎಂಬಿಬಿಎಸ್/ಬಿಡಿಎಸ್/ಎಂಡಿ/ಎಂಎಸ್/ಎಂಡಿಎಸ್ ಹಾಗೂ ವೈದ್ಯಕೀಯ ಡಿಪ್ಲೋಮಾ ವ್ಯಾಸಂಗ ಮಾಡುತ್ತಿರುವ ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡ ವಿದ್ಯಾರ್ಥಿಗಳಿಗೆ ವಿದ್ಯಾರ್ಥಿ ವೇತನ ಮರುಪಾವತಿ ಮಾಡಲಾಗಿದೆ.

ಪರಿಶಿಷ್ಟ ಜಾತಿಯ ವಿದ್ಯಾರ್ಥಿಗಳ ಅರ್ಜಿಯು ಸುಮಾರು 545 ಮತ್ತು ಪರಿಶಿಷ್ಟ ಪಂಗಡ ವಿದ್ಯಾರ್ಥಿಗಳ ಅರ್ಜಿಯು ಸುಮಾರು 30 ಇದ್ದು, ಸದರಿ ಅರ್ಜಿಗಳಿಗೆ ವಿದ್ಯಾರ್ಥಿವೇತನ ಪಾವತಿಸಲು ಅನುದಾನ ಕೊರತೆಯಿದ್ದು, ಹೆಚ್ಚುವರಿಯಾಗಿ ರೂ. 650.00ಲಕ್ಷಗಳ ಅನುದಾನವನ್ನು ಬಿಡುಗಡೆ ಮಾಡುವ ಪ್ರಸ್ತಾವನೆ ಸರ್ಕಾರದಲ್ಲಿ ಪರಿಶೀಲನೆ ಹಂತದಲ್ಲಿರುತ್ತದೆ.

ಮುಂದುವರೆದು, ಹೆಚ್ಚುವರಿ ಅನುದಾನ ಬಿಡುಗಡೆಯಾದ ನಂತರ ಉಳಿದ ವಿದ್ಯಾರ್ಥಿಗಳಿಗೆ ಹಾಗೂ 2024-25ನೇ ಸಾಲಿಗೆ ಅರ್ಜಿಗಳನ್ನು ಸಲ್ಲಿಸುತ್ತಿರುವ ವಿದ್ಯಾರ್ಥಿಗಳಿಗೆ SSP-DBT ಪೋರ್ಟಲ್‌ನ ಮೂಲಕ ವಿದ್ಯಾರ್ಥಿಗಳ ವೇತನ ಮರುಪಾವತಿಯನ್ನು ಕಾಲಕಾಲಕ್ಕೆ ಪಾವತಿಸಲಾಗುವುದು.

ಕಡತ ಸಂಖ್ಯೆ: ಇಡಿ 47 ಟಿಇಸಿ 2025

(ಡಾ: ಎಂ.ಸಿ.ಸುಧಾಕರ್)
ಉನ್ನತ ಶಿಕ್ಷಣ ಸಚಿವರು